ದಿನಾಂಕ 06.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಪಾಟೀ ಸವಾಲುಃ- ವಾದಿ ಪರ ವಕೀಲರಾದ ಶ್ರೀ ಸಿ.ಕೆ.ಪಿ ರವರಿಂದಃ-**

ನಾನು 2023 ರಿಂದ ಬ್ಯಾಂಕಿನಲ್ಲಿ ವ್ಯವಸ್ಥಾಪಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. 2010 ರಲ್ಲಿ ಶ್ರೀನಿವಾಸ್ ಎನ್ನುವವರು ವ್ಯವಸ್ಥಾಪಕರಾಗಿದ್ದರು. ದಿನಾಂಕ 31.07.2009 ರಿಂದ 30.04.2020 ರವರೆಗೆ ಪ್ರತಿವಾದಿಯ ಬ್ಯಾಂಕ್ ಖಾತೆ ಚಾಲ್ತಿಯಲ್ಲಿ ಇಲ್ಲದೇ ಇದ್ದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಸದರಿ ಬ್ಯಾಂಕ್ ಖಾತೆಯನ್ನು ದಿನಾಂಕ 30.04.2020 ರ ನಂತರ ಮುಂದುವರೆಸಿರುವ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪ್ರತಿವಾದಿಯು ಖಾತೆಯನ್ನು ಯಾವಾಗ ತೆರೆದಿರುತ್ತಾರೆ ಎಂಬುದು ನನಗೆ ಈಗ ಗೊತ್ತಿಲ್ಲ. ಪ್ರತಿವಾದಿಯು ತನ್ನ ಉಳಿತಾಯ ಖಾತೆಗೆ ಸಂಬಂಧಿಸಿದ ಚೆಕ್ ಪುಸ್ತಕವನ್ನು ಬ್ಯಾಂಕಿಗೆ ಹಿಂತಿರುಗಿಸಿದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಚೆಕ್ ಅನ್ನು ನಗದೀಕರಣಕ್ಕೆ ಹಾಜರುಪಡಿಸಿದ ಸಂದರ್ಭದಲ್ಲಿ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲವೆಂದು ಹಿಂಬರಹವನ್ನು ನೀಡಲಾಗಿರುತ್ತದೆ.

**ಮರು ವಿಚಾರಣೆಃ- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ)                    ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.